# ವಿಕಸಿತ ಭಾರತ ಸಾಕಾರಗೊಳಿಸುವಲ್ಲಿ ಯುವ ಶಾಸಕರ ಪಾತ್ರ ನಿರ್ಣಾಯಕ

**ಕಾಮನ್ವೆಲ್ತ್ ಸಂಸದೀಯ ಸಂಘದ ಪಶ್ಚಿಮ ವಲಯ ಸಮ್ಮೇಳನದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಅಭಿಮತ**



**ಪಣಜಿ, ಏ.9:** 2047ರ ವೇಳೆಗೆ ಅಭಿವೃದ್ಧಿ ಹೊಂದಿದ ಭಾರತ ನಿರ್ಮಾಣದಲ್ಲಿ ಯುವ ಶಾಸಕರ ಪಾತ್ರ ಮಹತ್ವದ್ದಾಗಿದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಎಸ್. ಹೊರಟ್ಟಿ ಅಭಿಪ್ರಾಯಪಟ್ಟಿದ್ದಾರೆ.

ಗೋವಾದ ಪಣಜಿಯಲ್ಲಿ ನಡೆಯುತ್ತಿರುವ ಕಾಮನ್ವೆಲ್ತ್ ಸಂಸದೀಯ ಸಂಘದ ಪಶ್ಚಿಮ ವಲಯ ಸಮ್ಮೇಳನದ ಪ್ಲೀನರಿ ಅಧಿವೇಶನದಲ್ಲಿ ಈ ಅಭಿಪ್ರಾಯ ವ್ಯಕ್ತಪಡಿಸಿದರು.

ಭಾರತವು ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವವಾಗಿದ್ದು, ಸ್ವಾತಂತ್ರ್ಯದ 100ನೇ ವರ್ಷದತ್ತ ಸಾಗುತ್ತಿರುವ ಈ ಸಂದರ್ಭದಲ್ಲಿ ವಿಕಸಿತ ಭಾರತ ಕನಸನ್ನು ಸಾಕಾರಗೊಳಿಸಲು ಯುವ ಶಾಸಕರ ಪಾತ್ರ ಅತ್ಯಂತ ನಿರ್ಣಾಯಕವಾಗಿದೆ. ಯುವ ಶಾಸಕರು ಹೊಸ ಆಲೋಚನೆಗಳು, ತಂತ್ರಜ್ಞಾನಕ್ಕೆ ಹೊಂದಿಕೊಳ್ಳುವಿಕೆ ಮತ್ತು ಜನಸಾಮಾನ್ಯರೊಂದಿಗೆ ನಿಕಟ ಸಂಪರ್ಕ ಹೊಂದಿರುವುದರಿಂದ ಪ್ರಜಾಪ್ರಭುತ್ವವನ್ನು ಹೆಚ್ಚು ಚೈತನ್ಯಮಯ ಮತ್ತು ಭವಿಷ್ಯಮುಖಿಯಾಗಿ ರೂಪಿಸುವ ಸಾಮರ್ಥ್ಯ ಹೊಂದಿದ್ದಾರೆ. ಶಿಕ್ಷಣ, ಉದ್ಯೋಗ, ಉದ್ಯಮಶೀಲತೆ, ಡಿಜಿಟಲ್ ಆಡಳಿತ ಮತ್ತು ಪಾರದರ್ಶಕತೆ ಕ್ಷೇತ್ರಗಳಲ್ಲಿ ನೀತಿ ರೂಪಿಸುವಲ್ಲಿ ಯುವ ಪ್ರತಿನಿಧಿಗಳು ಸಕ್ರಿಯ ಪಾತ್ರ ಹಾಗೂ ಹವಾಮಾನ ಬದಲಾವಣೆ, ನಗರೀಕರಣ ಮತ್ತು ತಾಂತ್ರಿಕ ಸವಾಲುಗಳನ್ನು ಎದುರಿಸುವಲ್ಲಿ ಯುವ ಶಾಸಕರು ಪ್ರಮುಖ ಸೇತುವೆಯಾಗಿ ಕಾರ್ಯನಿರ್ವಹಿಸಬೇಕು ಎಂದರು.